# ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ಹುದ್ದೆಗೆ ಅರ್ಹರಿಂದ ಅರ್ಜಿ ಆಹ್ವಾನ

ರಾಯಚೂರು: ಇಲ್ಲಿನ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಜಿಲ್ಲೆಯ 08 ಶಿಶು ಅಭಿವೃದ್ಧಿ ಯೋಜನಾ ವ್ಯಾಪ್ತಿಯಲ್ಲಿ ಖಾಲಿ ಇರುವ ಅಂಗನವಾಡಿ ಕೇಂದ್ರಗಳಿಗೆ ಅಂಗನವಾಡಿ ಕಾರ್ಯಕರ್ತೆಯರ ಮತ್ತು ಸಹಾಯಕಿಯರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.ಆಸಕ್ತರು, ಇಲಾಖೆಯ ವೆಬ್ಸೈಟ್ ವಿಳಾಸ:https://karnemakaone.kar.nic.in/abcd/ ನಲ್ಲಿ ಜ.7 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗಾಗಿ ಸಂಬಂಧಪಟ್ಟ ರಾಯಚೂರು, ಗಿಲ್ಲೇಸುಗೂರು, ಮಾನ್ವಿ, ಸಿರವಾರ, ಸಿಂಧನೂರು, ತುರ್ವಿಹಾಳ ಲಿಂಗಸುಗೂರು ಹಾಗೂ ದೇವದುರ್ಗ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಾರ್ಯಾಲಯವನ್ನು ಕಚೇರಿಯ ಸಮಯದಲ್ಲಿ ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.